ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ
ಹುಮನಾಬಾದ.

ಸಿ.ಸಿ ನಂ.4735/2023
ಸಿ.ಡಬ್ಲ್ಯೂ-2 ಪಿ.ಡಬ್ಲ್ಯೂ-2

ಹೆಸರು : ಸುನೀಲ ಭದ್ರಪ್ಪಾ ಮುದ್ನಾಳಕರ

ವಯಸ್ಸು : 48- ವರ್ಷ

ಉದ್ಯೋಗ : ಖಾಸಗಿ ಕೆಲಸ

ವಾಸ : ಹುಮನಾಬಾದ

ದಿನಾಂಕ: 25-02-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ ರವರಿಂದ:

ನನಗೆ ಚಾಸಾ-1 ಮತ್ತು 3 ರವರ ಪರಿಚಯ ಇರುವುದಿಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ಪಂಚನಾಮೆಯನ್ನು ಈಗ ನಿ.ಪಿ.-2 ಎಂದು ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸುಮಾರು 2-3 ವರ್ಷಗಳ ಹಿಂದೆ ನ್ಯೂ ಅಫ್ರೋಸತೆಲಿ ಚರ್ಚ ಹತ್ತಿರ ಸಹಿ ಪೊಲೀಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಯಾವುದೇ ಪಂಚನಾಮೆಯನ್ನು ಮಾಡಿಲ್ಲ. ನಿ.ಪಿ-2 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷಿ ನುಡಿದಿರುವುದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ, ಆಲಿಸಿ ಅನುಮತಿಯನ್ನು ನೀಡಲಾಯಿತು.)**

ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದಃ

ದಿ : 25-04-2023 ರಂದು ಮಧ್ಯಾಹ್ನ 4.30 ರಿಂದ 05.30 ರವರೆಗೆ ಚಾಸಾ-1 ರವರು ತೋರಿಸಿದ ಗುನ್ಹಾ ಸ್ಥಳದಲ್ಲಿ ಪೋಲಿಸರು ನನ್ನ ಹಾಗೂ ಚಾಸಾ-3 ರವರ ಸಮಕ್ಷಮದಲ್ಲಿ ಗುನ್ಹಾ ಸ್ಥಳದ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ-2 ರಂತೆ

ಪಂಚನಾಮೆಯನ್ನು ಮಾಡಿದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೆನೆ ಎಂದರೆ ಸರಿಯಲ್ಲ.

ಪಾಟೀ ಸವಾಲು: ಶ್ರೀ. ಆರ್.ಜಿ.ಎನ್. ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆ: ಇಲ್ಲ.

(ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೆ.ಕೆ. ಸರಿ ಇದೆ.

ಪ್ರಧಾನ ಜೆಎಂಎಫ್ ಸಿ ನ್ಯಾಯಾಧೀಶರು
ಹುಮನಾಬಾದ.